ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1169
2)	ಸದಸ್ಯರ ಹೆಸರು	:	ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
3)	ಉತ್ತರಿಸಬೇಕಾದ ದಿನಾಂಕ	:	20.12.2018.
4)	ಉತ್ತರಿಸುವವರು	:	ಮಾನ್ಯ ಮುಖ್ಯ ಮಂತ್ರಿಗಳು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ನಾಡಪ್ರಭು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಪ್ರಾರಂಭ ಮಾಡಿದ್ದು ಯಾವಾಗ; ಅಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಇದರಲ್ಲಿ ಕನ್ನಡಿಗರೆಷ್ಟು; (ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)	• ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕಾರ್ಯಾಚರಣೆಯು ದಿನಾಂಕ 24/05/2008 ರಂದು ಪ್ರಾರಂಭವಾಯಿತು. • ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹೊರ ಗುತ್ತಿಗೆ ನೌಕರರು ಸೇರಿ ಒಟ್ಟು 3708 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. • ಇದರಲ್ಲಿ ಕನ್ನಡಿಗರ ಒಟ್ಟು ಸಂಖ್ಯೆ: 2671. • (ಹುದ್ದೆವಾರು ಸಂಪೂರ್ಣ ಮಾಹಿತಿ ಅನುಬಂಧ-1 ರಲ್ಲಿ ಲಗತ್ತಿಸಿದೆ)
ಆ)	ಈ ವಿಮಾನ ನಿಲ್ದಾಣದ ವಿವಿಧ ಹುದ್ದೆಗಳ ಭರ್ತಿ ಸಮಯದಲ್ಲಿ ಡಾ: ಸರೋಜಿನಿ ಮಹಿಷಿ ವರದಿಯನ್ನು ಅನುಷ್ಠಾನ ಮಾಡಲಾಗಿದೆಯೇ; (ಮಾಹಿತಿ ನೀಡುವುದು)	ಕೆಂಪೇಗೌಡ ವಿಮಾನ ನಿಲ್ದಾಣವು ಪ್ರತಿಷ್ಠಿತ ಅಂತರಾಷ್ಟ್ರೀಯ ವಿಮಾನ ನಿಲ್ದಾಣವಾಗಿದ್ದು, ಜಾಗತಿಕ ಗುಣಮಟ್ಟಕ್ಕೆ ಅನುಗುಣವಾಗಿ ಗರಿಷ್ಠ ಮಟ್ಟದ ಸುರಕ್ಷತೆ, ದಕ್ಷತೆ ಮತ್ತು ಗ್ರಾಹಕರನ್ನು ತೃಪ್ತಿಪಡಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ. ಈ ಮಹತ್ವದ ಜವಾಬ್ದಾರಿಯನ್ನು ಪಾಲಿಸುವ ನಿಟ್ಟಿನಲ್ಲಿ ಅರ್ಹ ಅಭ್ಯರ್ಥಿಗಳನ್ನು ಎಲ್ಲಾ ಹಂತಗಳಲ್ಲಿಯೂ ನೇಮಿಸಿಕೊಳ್ಳಬೇಕಾಗುತ್ತದೆ. ಆದಾಗ್ಯೂ, ಹುದ್ದೆಗಳ ನೇಮಕಾತಿಯಲ್ಲಿ ಕನ್ನಡಿಗರಿಗೆ ಪ್ರಥಮ ಆಧ್ಯತೆಯನ್ನು ನೀಡಲಾಗುತ್ತಿದೆ.
ಇ)	ಮಾಡದಿದ್ದಲ್ಲಿ, ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು?	ಉದ್ಭವಿಸುವುದಿಲ್ಲ

ಸಂಖ್ಯೆ: ಮೂಅಇ 99 ರಾಅವಿ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ

ಅನುಬಂಧ – I

ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಹುದ್ದೆವಾರು ವಿವರ

ಕಾರ್ಯನಿರ್ವಾಹಕ/ಉನ್ನತ ಮಟ್ಟ			ವ್ಯವಸ್ಥಾಪಕರ ಹಂತ			ಮೇಲ್ವಿಚಾರಣೆ/ನುರಿತ ನೌಕರರ ಹಂತ			ಕೌಶಲ್ಯ ರಹಿತ/ಅರೆ ನುರಿತ/ಹೊರ ಗುತ್ತಿಗೆ ನೌಕರರು			ಒಟ್ಟು		
ಕನ್ನಡಿಗರು	ಇತರೆ	ಒಟ್ಟು	ಕನ್ನಡಿಗರು	ಇತರೆ	ಒಟ್ಟು	ಕನ್ನಡಿಗರು	ಇತರೆ	ಒಟ್ಟು	ಕನ್ನಡಿಗರು	ಇತರೆ	ಒಟ್ಟು	ಕನ್ನಡಿಗರು	ಇತರೆ	ಒಟ್ಟು
13	17	30	185	192	377	368	222	590	2105	606	2711	2671	1037	3708